# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಎ. ಮಂಜುನಾಥ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಕೋಲಾರ ಇವರ ವಿರುದ್ಧದ ಇಲಾಖಾ ವಿಚಾರಣೆ –ಅಂತಿಮ ಆದೇಶ ಕುರಿತು.

**ಓದಲಾಗಿದೆ:** 1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 96 ವಿಸೇಬಿ 2009 ದಿನಾಂಕ:01-03-2012.
2., ವಿಚಾರಣಾಧಿಕಾರಿಯವರ ವಿಚಾರಣಾ ವರದಿ ದಿನಾಂಕ:10-10-2013.

-----

**ಪ್ರಸ್ತಾವನೆ:**

ಶ್ರೀ ಎ. ಮಂಜುನಾಥ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಕೋಲಾರ ಇವರು ಸದರಿ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ 2009-10ನೇ ಸಾಲಿನಲ್ಲಿ ಅನಧಿಕೃತ ಕಟ್ಟಡಗಳ ಖಾತೆ ರದ್ದುಪಡಿಸಲು ಕ್ರಮ ವಹಿಸದೇ ಕರ್ತವ್ಯಲೋಪವೆಸಗಿರುವ ಆರೋಪಗಳ ಕುರಿತಂತೆ ಕರ್ನಾಟಕ ನಾಗರೀಕ ಸೇವಾ (ವ.ನಿಮೇ) ನಿಯಮಗಳು 1957 ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ: 01-03-2012 ರ ಸರ್ಕಾರಿ ಆದೇಶದಲ್ಲಿ ಶ್ರೀ ಸುಭಾಷ ಬಿ. ಗೋಗಿ, ನಿವೃತ್ತ ಜಿಲ್ಲಾ ಮತ್ತು ಸೆಷೆನ್ಸ್ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ ಮತ್ತು ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಕೋಲಾರ ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಲಾಗಿತ್ತು. ವಿಚಾರಣಾಧಿಕಾರಿಯವರು ಇಲಾಖಾ ವಿಚಾರಣೆಯನ್ನು ನಡೆಸಿ, ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ:10-10-2013 ರಂದು ಸರ್ಕಾರಕ್ಕೆ ವಿಚಾರಣಾ ವರದಿಯನ್ನು ಸಲ್ಲಿಸಿರುತ್ತಾರೆ. ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ಅಪಾದಿತರ ವಿರುದ್ಧದ ಆರೋಪಗಳು ಸಾಬೀತಾಗಿರುವುದಿಲ್ಲವೆಂದು ನಿರ್ಣಯಿಸಿರುತ್ತಾರೆ.

ವಿಚಾರಣಾಧಿಕಾರಿಗಳು ದಿನಾಂಕ: 10-10-2013 ರಂದು ಸಲ್ಲಿಸಿರುವ ವಿಚಾರಣಾ ವರದಿ ಮತ್ತು ಸಂಬಂಧಿಸಿದ ದಾಖಲೆಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ವಿಚಾರಣಾ ವರದಿಯನ್ನು ಒಪ್ಪಿಕೊಂಡಿರುತ್ತದೆ. ಅದರಂತೆ ಶ್ರೀ ಎ. ಮಂಜುನಾಥ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಕೋಲಾರ ಇವರನ್ನು ಅವರ ವಿರುದ್ಧದ ಆರೋಪಗಳಿಂದ ಮುಕ್ತಗೊಳಿಸಲು ತೀರ್ಮಾನಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 96 ವಿಸೇಬಿ 2010 ಬೆಂಗಳೂರು, ದಿನಾಂಕ:04-02-2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಸರ್ಕಾರವು ಶ್ರೀ ಎ. ಮಂಜುನಾಥ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಕೋಲಾರ ಪ್ರಸ್ತುತ ಯೋಜನಾ ನಿರ್ದೇಶಕರು, ದಕ್ಷಿಣ ಕನ್ನಡ, ಜಿಲ್ಲಾ ಪಂಚಾಯತಿ, ಮಂಗಳೂರು. ಇವರನ್ನು ಅವರ ವಿರುದ್ಧದ ಆರೋಪಗಳಿಂದ ದೋಷಮುಕ್ತಗೊಳಿಸಿ ಈ ಮೂಲಕ ಆದ್ರೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಚಂದ್ರಶೇಖರ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ

3. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ಕೋಲಾರ.
4. ಶ್ರೀ ಎ. ಮಂಜುನಾಥ್, ಯೋಜನಾ ನಿರ್ದೇಶಕರು, ದಕ್ಷಿಣ ಕನ್ನಡ, ಜಿಲ್ಲಾ ಪಂಚಾಯತಿ, ಮಂಗಳೂರು.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಸರ್ಕಾರದ ಕಾರ್ಯದರ್ಶಿ (ಪಂ.ರಾಜ್) /ಅಪರ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
7. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
8. ಮಾಹಿತಿ ಕೇಂದ್ರ / ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.